ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 15-9-2019

# ಶಾಸಕರ ಅನರ್ಹತೆ ಸುಪ್ರೀಂ ತೀರ್ಪಿನಂತೆ ಕ್ರಮ

15/9/19

**ಸಂ.ಕ. ಸಮಾಚಾರ ಮೈಸೂರು**

ಅನರ್ಹಗೊಂಡಿರುವ ಶಾಸಕರ ಬಗ್ಗೆ ತಾವು ಈಗಲೇ ಏನನ್ನೂ ಹೇಳುವುದಿಲ್ಲ. ಸುಪ್ರೀಂಕೋರ್ಟ್ ತೀರ್ಪು ಬಂದ ಬಳಿಕ ಅದರಂತೆ ಕ್ರಮಕೈಗೊಳ್ಳುವುದಾಗಿ ವಿಧಾನ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ನುಡಿದರು.



ನಗರ ಭೇಟಿ ವೇಳೆ ಸುದ್ದಿಗಾರರೊಡನೆ ಮಾತನಾಡಿ, ನ್ಯಾಯಾಲಯದ ತೀರ್ಪು ಹೊರಬರುವವರೆಗೂ ತಾವು ಏನನ್ನೂ ಮಾತನಾಡುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಇನ್ನು, ತಾವು ವಿಧಾನ ಸಭಾಧ್ಯಕ್ಷರಾಗಿರುವ ಅವಧಿಯಲ್ಲಿ ನೂತನ ಚಿಂತನೆ, ಜನಪರ ಕಾಳಜಿಗೆ ಹೆಚ್ಚು ಒತ್ತು ನೀಡುವುದಾಗಿ ತಿಳಿಸಿದರು.

ಇದರೊಡನೆ ಕರ್ನಾಟಕ ವಿಧಾನಸಭೆಯಲ್ಲಿ ಹೊಸತನ ತರಬೇಕು. ಹೊಸತನ ಪರಿಚಯಿಸಿದ ಕಾರಣಕ್ಕಾಗಿಯೇ ಡಿ. ದೇವರಾಜ ಅರಸು ಜನಮಾನಸದಲ್ಲಿ ಶಾಶ್ವತವಾಗಿ ಉಳಿದಿದ್ದಾರೆ.

ಹಾಗೇ ಹೊಸ ಶಾಸಕರು, ಜನಪರವಾಗಿ ಚಿಂತನೆಯುಳ್ಳವರಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ತಿಳಿಸಿದರು. ಇದಕ್ಕೂ ಮೊದಲು ಅವರು ಸೋನಾರ್ ರಸ್ತೆಯ ಅರ್ಜುನ್ ಗುರೂಜಿ ನಿವಾಸಕ್ಕೆ ಭೇಟಿ ನೀಡಿದ್ದರು. ಈ ವೇಳೆ ಮೈಸೂರು ಬ್ರಾಹ್ಮಣ ಸಂಘದ ವತಿಯಿಂದ ಅಭಿನಂದಿಸಲಾಯಿತು.